## ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:-* ಶ್ರೀ ಎ.ಎಸ್.ಪತ್ತಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು, ಧಾರವಾಡ ಇವರಿಗೆ ಸಂಭಾವನೆ ಮಂಜೂರು ಮಾಡುವ ಬಗ್ಗೆ.

*ಓದಲಾಗಿದೆ:*

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 6 ಇಎನ್‌ಕ್ಯೂ 06 ದಿನಾಂಕ:07.6.2016.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 45 ಸೇಇವಿ 2014, ದಿನಾಂಕ:08.1.2015.
3. ವಿಚಾರಣಾ ವರದಿ ದಿನಾಂಕ:01.10.2018

**ಪ್ರಸ್ತಾವನೆ**

ಮೇಲೆ ಓದಲಾದ ಕ್ರಮಾಂಕ (1) ದಿನಾಂಕ:07.6.2016 ರ ಆದೇಶದಲ್ಲಿ 2002-03 ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಕೊರೆಯಲಾದ ಕೊಳವೆ ಬಾವಿಗಳಲ್ಲಿ ಹಣ ದುರುಪಯೋಗಪಡಿಸಿಕೊಂಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಶ್ರೀ ಜೋಸೆಫ್ ಕಡೆಮನಿ, ಹಿಂದಿನ ದ್ವಿ.ದ.ಸ ಮತ್ತು ಇತರರ ವಿರುದ್ದ ಇಲಾಖಾ ವಿಚಾರಣೆ ನಡೆಸಲು ಶ್ರೀ ಎ.ಎಂ.ಪತ್ತಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿತ್ತು.

ಐದಕ್ಕಿಂತ ಹೆಚ್ಚು ಆರೋಪಿತರನ್ನು ಒಳಗೊಂಡಿರುವ ಜಂಟಿ ಇಲಾಖಾ ವಿಚಾರಣ ಪ್ರಕರಣಗಳಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ಒಟ್ಟು ರೂ 25,000/-ಗಳ ಸಂಭಾವನೆಯನ್ನು ಪಾವತಿಸಲು ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ದಿನಾಂಕ:08.1.2015 ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಅದರಂತೆ, ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ, ಮೇಲೆ ಕ್ರಮಾಂಕ(3) ರಲ್ಲಿ ಓದಲಾದ ದಿನಾಂಕ:01.10.2018 ರಂದು ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಆದುದರಿಂದ ವಿಚಾರಣಾಧಿಕಾರಿಗೆ ನಿಯಮಾನುಸಾರ ಸಂಭಾವನೆ/ಭತ್ಯೆ ಮಂಜೂರು ಮಾಡಲು ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:ಗ್ರಾಅಪ 06 ಇಎನ್‌ಕ್ಯೂ 2005, ಬೆಂಗಳೂರು, ದಿನಾಂಕ:10.01.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಸರ್ಕಾರವು ಶ್ರೀ ಎ.ಎಂ.ಪತ್ತಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/ವಿಚಾರಣಾಧಿಕಾರಿಗಳು ಇವರಿಗೆ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 45 ಸೇಇವಿ 2014, ದಿನಾಂಕ:08.1.2015 ರಲ್ಲಿ ನಿಗಧಿಪಡಿಸಿರುವ ಸಂಚಿತ ಸಂಭಾವನೆ ಮೊತ್ತ ರೂ.25,000-00 (ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಲು ಮಂಜೂರಾತಿ ನೀಡಿದೆ.

---2

ಸದರಿ ಮೊತ್ತವನ್ನು ಶ್ರೀ ಎ.ಎಂ.ಪತ್ತಾರ, ವಿಚಾರಣಾಧಿಕಾರಿ ಇವರಿಗೆ ಪಾವತಿಸಲು ಕೂಡಲೇ ಕ್ರಮವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 10/01/2019
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

10/01

ಇವರಿಗೆ:

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು – ವಿಚಾರಣಾಧಿಕಾರಿಯವರ ಹೆಸರಿಗೆ ಚೆಕ್ ಬರೆದು ಅವರ ವಿಳಾಸಕ್ಕೆ ನೊಂದಣಿ ಅಂಚೆ ಮುಖಾಂತರ ಕಳುಹಿಸುವಂತೆ ಕೋರಿದೆ.
3. ಶ್ರೀ ಎ.ಎಂ.ಪತ್ತಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮನೆ ನಂ.144, 2 ನೇ ಕ್ರಾಸ್, ಲಕ್ಷ್ಮೀನಗರ, ಗೋಕುಲ ರಸ್ತೆ, ರವಿನಗರ ಹತ್ತಿರ, ಹುಬ್ಬಳ್ಳಿ
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
5. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರು.
6. ಹೆಚ್ಚುವರಿ ಪ್ರತಿ :ಶಾಖಾ ರಕ್ಷಾ ಕಡತ:ಕಂಪ್ಯೂಟರ್ ಶಾಖೆ.